# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸ.ಕಾ.ನಿ.ಅ/ಕಾ.ಪೇ.ಉ.ವಿ/ಬೆಂ/ಪ್ರ.ದ.ಸ/
ಸಭೆಯ ನಡವಳಿ/ಸಂಖ್ಯೆ568/2020-21

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಿನಾಂಕ : ೦೪|೦೨|೨೦೨೧

**ವಿಷಯ:-** ದಿನಾಂಕ. 06.02.2021ರಂದು ನಡೆದ ವಾರ್ಡ್ ಸಂಖ್ಯೆ. 120ರ ಸಮಿತಿ ಸಭೆಯ ನಡವಳಿಗಳು.

**ಉಲ್ಲೇಖ:-** ಆಯುಕ್ತರ ಕಛೇರಿ ಆದೇಶ ಸಂಖ್ಯೆ. ಬಿ12(5)ಪಿ.ಆರ್/35/2020/21, ದಿ. 21.09.2020.

1. ವಾರ್ಡ್ ಸಮಿತಿಯ ಅಧ್ಯಕ್ಷರಾದ ಶ್ರೀಮತಿ ಮುನಿಲಕ್ಷ್ಮಿ ರವರ ಅಧ್ಯಕ್ಷತೆಯಲ್ಲಿ ವಾರ್ಡ್ ಕಮಿಟಿ ಸಭೆಯನ್ನು ಇತರೆ ಸದಸ್ಯರು ಮತ್ತು ಕಾರ್ಯದರ್ಶಿಯವರ ಸಮ್ಮುಖದಲ್ಲಿ ಪ್ರಾರಂಭಿಸಲಾಯಿತು.

2. ಕೆ.ಪಿ ಅಗ್ರಹಾರದ ಗಾಂಧಿ ಶಿಲೆ ರಸ್ತೆಯ ಬದಿಯಲ್ಲಿರುವ ಡೆಬ್ರೀಸ್‌ನ್ನು ಶೀಘ್ರವೇ ವಿಲೇವಾರಿ ಮಾಡುವುದರ ಬಗ್ಗೆ ಅಧಿಕಾರಿಗಳಿಗೆ ಸೂಚಿಸಲಾಯಿತು.

3. ಎಸ್.ಎಂ.ಲೇನ್ ಹಾಗೂ ಸುಲ್ತಾನ್‌ಪೇಟೆಯಲ್ಲಿ ಚರಂಡಿ ಹೂಳನ್ನು ತೆಗೆದು ರಸ್ತೆಯ ಬದಿಯಲ್ಲಿ ಹಾಕಿದ್ದಾರೆ ಹಾಗಾಗಿ ಸಾರ್ವಜನಿಕರ ಓಡಾಟಕ್ಕೆ ತೊಂದರೆಯುಂಟಾಗುತ್ತಿದೆ ಸದರಿ ಹೂಳನ್ನು ಶೀಘ್ರವೇ ವಿಲೇವಾರಿ ಮಾಡುವುದಾಗಿ ಅಧಿಕಾರಿಗಳಿಗೆ ಸೂಚಿಸಲಾಯಿತು.

4. ವಾರ್ಡಿನಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಚರಂಡಿ ಹೂಳನ್ನು ತೆಗೆದು ರೋಡಿಗೆ ಎಸೆದು ಸಾರ್ವಜನಿಕರ ಓಡಾಟಕ್ಕೆ ತೊಂದರೆ ಉಂಟುಮಾಡುತ್ತಿದ್ದಾರೆ ಹಾಗಾಗಿ ಸದರಿ ಹೂಳನ್ನು ಒಣಗಿದ ನಂತರ ಶೀಘ್ರವೇ ವಿಲೇವಾರಿ ಮಾಡುವುದಾಗಿ ಅಧಿಕಾರಿಗಳಿಗೆ ಸೂಚಿಸಲಾಯಿತು.

5. ಕೆ.ಪಿ ಅಗ್ರಹಾರದ ಎಸ್.ಬಿ.ಐ ಕ್ವಾಟ್ರಸ್ ರಸ್ತೆಯಲ್ಲಿ, ರಸ್ತೆಯ ಗುಂಡಿಗಳನ್ನು ಶೀಘ್ರವೇ ತುಂಬಲು ಅಧಿಕಾರಿಗಳಿಗೆ ಸೂಚಿಸಲಾಯಿತು.

6. ಕೆ.ಪಿ ಅಗ್ರಹಾರದ ಕೇಶವನಗರದಲ್ಲಿ ಸಾರ್ವಜನಿಕರ ಶೌಚಾಲಯಗಳು ದುರಸ್ಥಿಯ ಬಗ್ಗೆ ಸಾರ್ವಜನಿಕರು ಹಲವು ದೂರುಗಳನ್ನು ನೀಡಿದ್ದು, ಸದರಿ ಶೌಚಾಲಯಗಳು ಸಾರ್ವಜನಿಕರ ಉಪಯೋಗಕ್ಕೆ ತೊಂದರೆಯಾಗುತ್ತಿದ್ದು, ಹಾಗಾಗಿ ಸದರಿ ಶೌಚಾಲಯಗಳನ್ನು ಶೀಘ್ರವೇ ಸರಿಪಡಿಸಲು ಮಾನ್ಯ ವಾರ್ಡ್ ಸಮಿತಿಯ ಅಧ್ಯಕ್ಷರು ಅಧಿಕಾರಿಗಳಿಗೆ ಸೂಚಿಸಿದರು.

Scanned with CamScanner

7. ಮಾನ್ಯ ನೋಡಲ್ ಅಧಿಕಾರಿಯವರು ಮುಂದಿನ ಸಭೆಯಲ್ಲಿ ವಾರ್ಡಿನ ಕುಂದು ಕೊರತೆಗಳ ಬಗ್ಗೆ ಸಮಗ್ರವಾಗಿ ಚರ್ಚಿಸಬೇಕೆಂದು ತಿಳಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

<u>ನಿರ್ಣಯ:-</u>

ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಮುಂದಿನ ಸಭೆಯೊಳಗಾಗಿ ಶೀಘ್ರವಾಗಿ ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳಲು ಸಭೆಯು ತಿರ್ಮಾನಿಸಿತ್ತು.

| | |
|---|---|
| ಕಾರ್ಯದರ್ಶಿ | ಅಧ್ಯಕ್ಷರು |
| ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ. 120 | ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ. 120 |
| ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು :**

1. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
3. ಕಾರ್ಯಪಾಲಕ ಅಭಿಯಂತರರು, ಗಾಂಧಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕಾಟನ್‌ಪೇಟೆ ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಕಛೇರಿ ಕಡತಕ್ಕೆ.

Scanned with CamScanner